**MARCH 27, 2025**

**AKASHAVANI - DHARWAD**

**PRADESH SAAMACHARA (KANNADA) 12.00 P.M.**

**<><><>**

ವಿದ್ಯುತ್ ಸ್ಮಾರ್ಟ್ ಮೀಟರ್ ಟೆಂಡರ್ ಪ್ರಕ್ರಿಯೆ ಪಾರದರ್ಶಕವಾಗಿ ನಡೆದಿದೆ, ಈ ಕುರಿತ ಬಿಜೆಪಿಯ ಆರೋಪಗಳಲ್ಲಿ ಹುರಳಿಲ್ಲ ಎಂದು, ಇಂಧನ ಖಾತೆ ಸಚಿವ ಕೆ.ಜೆ. ಜಾರ್ಜ್, ಬೆಂಗಳೂರಿನಲ್ಲಿ ಸ್ಪಷ್ಟ ಪಡಿಸಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಚಿವರು, 'ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ – ಕೆ.ಇ.ಆರ್.ಸಿ. ಆದೇಶದಂತೆ, ರಾಜ್ಯದಲ್ಲಿ ಹೊಸ ಮತ್ತು ತಾತ್ಕಾಲಿಕ ಸಂಪರ್ಕಗಳಿಗೆ ಮಾತ್ರ, ಮೀಟರ್ ಅಳವಡಿಸಲಾಗುತ್ತಿದೆ. ಅದಕ್ಕಾಗಿ ಕೆ.ಟಿ.ಪಿ.ಪಿ. ಕಾಯ್ದೆ ಅನುಸಾರ, ಟೆಂಡರ್ ಕರೆದು ನಂತರ ಪ್ರಿಬಿಡ್ ಸಭೆಯಲ್ಲಿ, ಆಸಕ್ತ ಬಿಡ್ಡುದಾರರ ಪ್ರಶ್ನೆಗಳಿಗೆ ಉತ್ತರಿಸಲಾಗಿತ್ತು.  ಬಳಿಕ ಅತಿ ಕಡಿಮೆ ಬಿಡ್ ಮಾಡಿದ್ದ, ರಾಜಶ್ರೀ ಎಂಟರ್ ಪ್ರೈಸಸ್‌ನವರಿಗೆ ಗುತ್ತಿಗೆ ನೀಡಲಾಗಿದೆ', ಎಂದು ಹೇಳಿದರು.

<><><>

ಉತ್ತರಕನ್ನಡ ಜಿಲ್ಲೆಯೊಂದಿಗೆ ಹಂಚಿಕೊಂಡಿರುವ, ಗೋವಾ ರಾಜ್ಯದ ಗಡಿ ಮೂಲಕ, ರಾಜ್ಯಕ್ಕೆ ಮಾದಕ ವಸ್ತು ಮತ್ತು ಅನಧಿಕೃತ ಮದ್ಯ ಸಾಗಣೆ ಬಗ್ಗೆ ಕಟ್ಟುನಿಟ್ಟಾಗಿ ಪರಿಶೀಲಿಸಿ, ಕಾನೂನಿನ ಅಡಿ ಸೂಕ್ತ ಕ್ರಮ ಜರುಗಿಸುವಂತೆ, ಗೃಹ ಖಾತೆ ಸಚಿವ ಜಿ. ಪರಮೇಶ್ವರ ಸೂಚಿಸಿದ್ದಾರೆ. ಕಾರವಾರ ಜಿಲ್ಲಾ ಪೊಲೀಸ್ ವರಿ ್ಠಾಧಿಕಾರಿಗಳ ಕಚೇರಿಯಲ್ಲಿ, ಇಲಾಖೆಯ ಪ್ರಗತಿ ಪರಿಶೀಲಿಸಿ, ಮಾತನಾಡಿ, ಈ ಸೂಚನೆ ನೀಡಿದ ಅವರು, ಉತ್ತರಕನ್ನಡ ಜಿಲ್ಲೆಯ ಎಲ್ಲ ಪೊಲೀಸ್ ಠಾಣೆಗಳ ಅಧಿಕಾರಿಗಳು, ತಮ್ಮ ವ್ಯಾಪ್ತಿಯ ಶಾಲಾ ಕಾಲೇಜುಗಳಿಗೆ ನಿರಂತರ ಭೇಟಿ ನೀಡಿ, ಮಾದಕ ವಸ್ತುಗಳ ದು ್ಪರಿಣಾಮಗಳ ಕುರಿತು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಬೇಕು ಎಂದು, ನಿರ್ದೇಶಿಸಿದರು.

<><><>

ಕೇಂದ್ರ ಪುರಸ್ಕೃತ ಅಮೃತ್ ಯೋಜನೆಯಡಿ ಚಿಕ್ಕಮಗಳೂರು ಜಿಲ್ಲೆಗೆ 600 ಕೋಟಿ, ತರೀಕೆರೆ ಕ್ಷೇತ್ರಕ್ಕೆ 100 ಕೋಟಿ ರೂಪಾಯಿ ಅನುದಾನ ನೀಡಲಾಗಿದೆ ಎಂದು ನಗರಭಿವೃದ್ಧಿ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ಪಟ್ಟಣದ ಗಾಂಧಿ ವೃತ್ತದಲ್ಲಿ ನಡೆದ ನಿರಂತರ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಈ ಅನುದಾನದಡಿ ಕುಡಿಯುವ ನೀರು ಸರಬರಾಜು ಹಾಗು ಇತರೆ ಯೋಜನೆಗಳ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

<><><>

ಪರಿಶಿ ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಸೇರಿದ, ಹಲವು ಸಮುದಾಯಗಳ ಜನ, ಇಂದಿಗೂ ನಿವೇಶನ, ವಸತಿ ಸೌಲಭ್ಯ ಹಾಗೂ ಅಗತ್ಯ ಮೂಲಸೌಕರ್ಯಗಳಿಲ್ಲದೇ ಬಳಲುತ್ತಿದ್ದಾರೆ ಎಂದು, ನಿಗಮದ ಅಧ್ಯಕ್ಷೆ ಜಿ. ಪಲ್ಲವಿ ತಿಳಿಸಿದ್ದಾರೆ.

ಹಾಸನದ ಬಂಬು ಬಜಾರ್ ಹಾಗೂ ಸಿದ್ದೇಶ್ವರ ನಗರದಲ್ಲಿ, ಹಂದಿ ಜೋಗಿ ಸಮುದಾಯದ ಜನರ ಸಮಸ್ಯೆಗಳನ್ನು ಆಲಿಸಿ ಮಾತನಾಡಿದ ಅವರು, ಅಂತಹ ಪ್ರತಿಯೊಂದು ಕುಟುಂಬಕ್ಕೂ, ಸೌಕರ್ಯ ಕಲ್ಪಿಸಲು ಪರಿಶಿ ್ಟ ಜಾತಿ ಮತ್ತು ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮ, ಪ್ರಯತ್ನಿಸುತ್ತಿದೆ ಎಂದರು.

<><><>

ಇಂದು ವಿಶ್ವ ರಂಗಭೂಮಿ ದಿನಾಚರಣೆ. ರಂಗಭೂಮಿ ನಿರತರಿಗೆ ಒಂದು ಸ್ಮರಣೀಯ ದಿನ ಬೇಕು ಎನ್ನುವ ಉದ್ದೇಶದಿಂದ 1962 ರಿಂದ ವಿಶ್ವ ರಂಗಭೂಮಿ ದಿನವನ್ನು ಪ್ರತಿ ವರ್ಷ ಮಾರ್ಚ 27 ರಂದು, ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ಜಗತ್ತಿನಾದ್ಯಂತ ಆಚರಿಸಿಕೊಂಡು ಬರಲಾಗುತ್ತಿದೆ. ವಿಶ್ವ ರಂಗಭೂಮಿ ದಿನದ ಅಂಗವಾಗಿ ರಾಜ್ಯದ ವಿವಿಧೆಡೆ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು, ಧಾರವಾಡದ ಅಭಿನಯ ಭಾರತಿ ಪ್ರತಿವರ್ಷ ಕೊಡಮಾಡುವ 30 ನೇ ಅಭಿನಯ ಭಾರತಿ ರಂಗ ಪುರಸ್ಕಾರವನ್ನು, ಬೆಳಗಾವಿ ಜಿಲ್ಲೆ, ಸವದತ್ತಿಯ ಕ್ರಿಯಾಶೀಲ ನಟ, ನಿರ್ದೇಶಕ ಝಾಕಿರ್ ನದಾಫ್ ಅವರಿಗೆ, ಜಿಲ್ಲಾ ಸಾಹಿತ್ಯ ಪರಿಷತ್ ಸಭಾಭವನದಲ್ಲಿ ಇಂದು ಪ್ರದಾನ ಮಾಡಲಾಯಿತು. ಇದೇ ಸಂದರ್ಭದಲ್ಲಿ 'ಸಂಸ್ಕೃತ ನಾಟಕಗಳಲ್ಲಿ ರಾಜಕೀಯ ಪ್ರಜ್ಞೆ' ವಿಷಯವಾಗಿ ಕೃಷ್ಣ ಕಟ್ಟಿ ಉಪನ್ಯಾಸ ನೀಡಿದರು.

<><><>

ವಿಶ್ವ ರಂಗಭೂಮಿ ದಿನಾಚರಣೆ ಹಿನ್ನೆಲೆ, ಕಾಸರಗೋಡಿನ ಕನ್ನಡ ಗ್ರಾಮ ರಸ್ತೆಯಲ್ಲಿ, ಇಂದು ಮಧ್ಯಾಹ್ನ 3.30 ಕ್ಕೆ ಗಡಿನಾಡು ಕನ್ನಡ ನಾಟಕೋತ್ಸವ ಆಯೋಜಿಸಲಾಗಿದೆ. ಕರಾವಳಿ ಸಾಂಸ್ಕೃತಿಕ ಪ್ರತಿಷ್ಠಾನ ಆಯೋಜಿಸಿರುವ ಈ ಕಾರ್ಯಕ್ರಮದಲ್ಲಿ, ಧಾರವಾಡದ ರಂಗ ಪರಿಸರ ತಂಡ ಪ್ರಸ್ತುತಪಡಿಸುವ, ಡಾಕ್ಟರ್ ಎಂ.ಎಂ. ಕಲಬುರಗಿ ಅವರ, 'ಖರೇ ಖರೇ ಸಂಗ್ಯಾ ಬಾಳ್ಯಾ' ಸೇರಿದಂತೆ, 4 ನಾಟಕಗಳು ಪ್ರದರ್ಶನಗೊಳ್ಳಲಿವೆ.

<><><>

ಯುವ ನಿಧಿ ಯೋಜನೆ ಅಡಿ, ದಾವಣಗೆರೆ ಜಿಲ್ಲೆಯಲ್ಲಿ, 6 ಸಾವಿರದ 458 ಪದವಿಧರರು ಹಾಗೂ 125 ಡಿಪ್ಲೊಮಾ ಉದ್ಯೋಗಾಕಾಂಕ್ಷಿಗಳು ಸೇರಿ, ಒಟ್ಟು 6 ಸಾವಿರದ 583 ಜನರಿಗೆ, 12 ಕೋಟಿ 66 ಲಕ್ಷ ರೂಪಾಯಿ ನೇರವಾಗಿ ಫಲಾನುಭವಿಗಳ ಖಾತೆಗೆ ಜಮೆ ಮಾಡಲಾಗಿದೆ ಎಂದು, ದಾವಣಗೆರೆ ಜಿಲ್ಲಾ ಪಂಚಾಯ್ತಿ ಸಿ.ಇ.ಓ. ಸುರೇಶ ಇಟ್ನಾಳ ತಿಳಿಸಿದ್ದಾರೆ.

<><><>

ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದ 3 ಸಾವಿರದ 351 ವಿದ್ಯಾರ್ಥಿಗಳಿಗೆ, 5 ಕೋಟಿ 16 ಲಕ್ಷ ರೂಪಾಯಿ ವಿದ್ಯಾರ್ಥಿ ವೇತನ ಪಾವತಿಸಲಾಗಿದೆ ಎಂದು, ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಸಗೋಡು ಜಯಸಿಂಹ, ಬೆಂಗಳೂರಿನಲ್ಲಿ ತಿಳಿಸಿದ್ದಾರೆ. ಪ್ರಸಕ್ತ ಆಯವ್ಯಯದಲ್ಲಿ, ಮುಖ್ಯಮಂತ್ರಿಯವರು, ಮಂಡಳಿಗೆ 10 ಕೋಟಿ ರೂಪಾಯಿ ಅನುದಾನ ಒದಗಿಸಿದ್ದಾರೆ.

<><><>

**ಯುಗಾದಿ ಹಾಗೂ ರಂಜಾನ್ ಹಬ್ಬದ ಹಿನ್ನೆಲೆ, ರಾಜ್ಯ ರಸ್ತೆ ಸಾರಿಗೆ ನಿಗಮ, 2 ಸಾವಿರ ಹೆಚ್ಚುವರಿ ಬಸ್ಸುಗಳ ವ್ಯವಸ್ಥೆ ಮಾಡಿದೆ. ಬೆಂಗಳೂರಿನಿಂದ ವಿವಿಧ ಸ್ಥಳಗಳಿಗೆ, ನಾಳೆ 28 ರಿಂದ 30 ರವರೆಗೆ ವಿಶೇ ’ ಸಾರಿಗೆ ಲಭ್ಯವಿದ್ದು, ಮುಂಗಡ ಬುಕ್ಕಿಂಗ್‌ಗೆ ಅವಕಾಶ ಕಲ್ಪಿಸಲಾಗಿದೆ.**

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**
**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.**

<><><><><>